**"Azadi Ka Amrit Mahotsav"**

**INDIA@75**

**ಕೃಷಿ ವಿಶ್ವ ವಿದ್ಯಾನಿಲಯ**

**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**

**ಜಿ.ಕೆ.ವಿ.ಕೆ., ಬೆಂಗಳೂರು–560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

---

**ದಿನಾಂಕ:** 03-09.2021

## ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

**ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)**

**(ದಿನಾಂಕ 04–09–2021 ರಿಂದ 08–09–2021 ವರೆಗೆ)**

| ನಿಯತಾಂಕಗಳು | 04.09.2021 | 05.09.2021 | 06.09.2021 | 07.09.2021 | 08.09.2021 |
|---|---|---|---|---|---|
| ಮಳೆ (ಮಿ ಮಿ) | 16 | 12 | 11 | 6 | 6 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 27 | 28 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 21 | 21 | 20 |
| ಮೋಡ ( ಪ್ರಮಾಣ) | 7 | 7 | 4 | 4 | 4 |
| ಆರ್ದ್ರತೆ 7.20 ಬೆ (ಶೇ) | 95 | 95 | 95 | 94 | 94 |
| ಆರ್ದ್ರತೆ 2.20 ಮ (ಶೇ) | 81 | 81 | 81 | 80 | 80 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3 | 4 | 5 | 6 | 7 |
| ಗಾಳಿಯ ದಿಕ್ಕು ( ಡಿಗ್ರಿ) | 283 | 252 | 283 | 257 | 252 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆ0ಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 27.0–29.0$^{o}$ C ಮತ್ತು ಕನಿಷ್ಠ 20.0–21.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **94-95 %** ಇದ್ದು ಮಧ್ಯಾಹ್ನ **80-81 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3–7** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

### "ಮಗೆ ಮಳೆ ಹುಯ್ದರೆ, ಬೆಳೆಯೆಲ್ಲಾ ಸಮೃದ್ಧ !"

- ಮಗೆ ಮಳೆಯು ಕಾಲವು ಆಗಸ್ಟ್ ತಿಂಗಳ 17 ರಿಂದ ಆಗಸ್ಟ್ ತಿಂಗಳ 30 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 62.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯ ಮುನ್ಸೂಚನೆ ಇದೆ, ತದನಂತರ ದೀರ್ಘಾವಧಿ ಹವಾಮಾನ ಮುನ್ಸೂಚನೆಯ ಪ್ರಕಾರ ಸೆಪ್ಟೆಂಬರ್ ಮೊದಲನೇ ಮತ್ತು ಎರಡನೇ ವಾರದ ವರೆಗೂ ಸರಾಸರಿ ಮಳೆಯ ಸಾಧ್ಯತೆ ಇರುವುದರಿಂದ ಮುಂಗಾರು ಬಿತ್ತನೆಯನ್ನು ಮುಂದುವರಿಸಿ.<br>➢ ಆರ್ದ್ರತೆ ಹೆಚ್ಚಿರುವುದರಿಂದ ಬಿತ್ತನೆ ಮಾಡಿರುವ ಬೆಳೆಗಳಲ್ಲಿ ಕೀಟ ಹಾಗೂ ರೋಗಗಳು ಹೆಚ್ಚಬಹುದು. ಆದುದರಿಂದ ಬೆಳೆಗಳನ್ನಾಧರಿಸಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು.<br>➢ ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು ( ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ–ಹೊದಿಕೆಯಾಗಿ ಹರಡುವುದು<br>➢ ಜುಲೈ ತಿಂಗಳ ಎರಡನೇ ವಾರ ಮತ್ತು ಆಗಸ್ಟ್ ತಿಂಗಳ ಮೊದಲ ವಾರದಲ್ಲಿ ಬಿತ್ತನೆ ಮಾಡಿರುವ ರಾಗಿ ಬೆಳೆಯಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು. |

| | |
|---|---|
| | ➢ ಮೆಕ್ಕೆಜೋಳ ಬೆಳೆಯಲ್ಲಿ ಕಾಂಡಕೊರಕದ ಹುಳುವಿನ ಹತೋಟಿಗೆ ಕ್ವಿನಾಲ್‌ಫಾಸ್–25 ಇ.ಸಿ. ಕೀಟನಾಶಕವನ್ನು 2 ಮಿ.ಲೀ/ಪ್ರತಿ ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಿ. ಅಥವಾ ಕ್ಲೋರೋಪೈರಿಫಾಸ್–20 ಇ.ಸಿ. ಕೀಟನಾಶಕವನ್ನು 2 ಮಿ.ಲೀ/ಪ್ರತಿ ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ಇಳಿಜಾರಿಗೆ ಅಡ್ಡಲಾಗಿ ಉಳುಮೆಯನ್ನು ಮಾಡಿ ಇದರಿಂದ ಮಣ್ಣಿನ ಸವಕಳಿ ಕಡಿಮೆಯಾಗುತ್ತದೆ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br><br>**ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365, ಜಿ.ಪಿ.ಯು-26, 45 & 48 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ ಮತ್ತು ಹೇಮ –ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| **ಮಾವು** | ➢ ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಚ್ಚುತ್ತವೆ. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.